# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.02 | Issue. 24 | Pages. 2 | Date: 20-12-2025, SATURDAY    RNI NO: KARKAN/2024/89601    Kannada Daily

ಸಂಪುಟ : 02 – ಸಂಚಿಕೆ : 24 – ಪುಟಗಳು : 2    20-12-2025    ಶನಿವಾರ    Ph: 8762954248    ದರ : ₹1

# ಗೋ ಹತ್ಯೆ ಆರೋಪಿಗೆ ಜಾಮೀನು ವಿರೋಧಿಸಿ ಪ್ರತಿಭಟನೆ

## ನಗರ ಠಾಣೆ ಎದುರು ಹಿಂದುಪರ ಕಾರ್ಯಕರ್ತರ ದಂಡು | ಪೊಲೀಸರೊಂದಿಗೆ ವಾಗ್ವಾದ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಗೋ ಹತ್ಯೆ ಆರೋಪಿಗಳನ್ನು ಸಾಕ್ಷಿ ಸಮೇತ ವಶಕ್ಕೆ ಪಡೆದರೂ ಕ್ರಮ ಜರುಗಿಸದೆ ಪೊಲೀಸರು ರಾಜಕೀಯ ಒತ್ತಡಕ್ಕೆ ಮಣಿದು ಬಿಡುಗಡೆ ಮಾಡಿದ್ದಾರೆ ಎಂದು ಆರೋಪಿಸಿ ಹಿಂದುಪರ ಕಾರ್ಯಕರ್ತರು ಶುಕ್ರವಾರ ಪ್ರತಿಭಟನೆ ನಡೆಸಿದರು.

ನಗರದ ಎನ್.ಆರ್.ವೃತ್ತದಲ್ಲಿರುವ ನಗರ ಠಾಣೆ ಎದುರು ಸಂಜೆ 7 ಗಂಟೆಗೆ ಜಮಾಯಿಸಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಈ ವೇಳೆ ಪೊಲೀಸರೊಂದಿಗೆ ಮಾತಿನ ಚಕಮಕಿಯೂ ನಡೆಯಿತು.

ನಗರದ ಸಂತೆಪೇಟೆಯಲ್ಲಿ ಗುರುವಾರ ಮಧ್ಯಾಹ್ನ ಹೊಳೆನರಸೀಪುರದಿಂದ ಬುಲೆರೋ ಪಿಕ್‌ಅಪ್ ವಾಹನದಲ್ಲಿ ತರುತ್ತಿದ್ದ ಅಕ್ರಮ ಗೋ ಮಾಂಸವನ್ನು ಹಿಂದು ಪರ ಕಾರ್ಯಕರ್ತರು ತಡೆದಿದ್ದರು. ಈ ಸಂಬಂಧ ವಾಹನವನ್ನು ವಶಕ್ಕೆ ಪಡೆದಿದ್ದ ನಗರ ಠಾಣೆ ಪೊಲೀಸರು ಚಾಲಕನನ್ನು ಬಂಧಿಸಿದ್ದರು. ಆದರೆ ಮಾರನೇ ದಿನವೇ ಜಾಮೀನು ನೀಡಿ ಬಿಡುಗಡೆ ಮಾಡಿದ್ದಾರೆ. 2021ರ ಜಾನುವಾರು ಹತ್ಯೆ ನಿಷೇಧ ಕಾಯ್ದೆ ಪ್ರಕಾರ ಆರೋಪಿತರಿಗೆ ಕಠಿಣ ಶಿಕ್ಷೆ ವಿಧಿಸಬಹುದು. ಜನಪ್ರತಿನಿಧಿಯೊಬ್ಬರ ಸೂಚನೆ ಮೇರೆಗೆ ಜಾಮೀನು ಮಂಜೂರು ಮಾಡಿದ್ದಾರೆಂದು ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

### ಕಾನೂನು ಪಾಲನೆ ಪ್ರಶ್ನಿಸಬೇಡಿ

ಹಿಂದುಪರ ಸಂಘಟನೆ ಕಾರ್ಯಕರ್ತರಾದ ಲೋಕೇಶ್, ಅಭಿ, ಧರ್ಮನಾಯ್ಕ ಹಾಗೂ ಇತರರು ವೃತ್ತ ನಿರೀಕ್ಷಕ ಗಂಗಾಧರಪ್ಪ ಅವರೊಂದಿಗೆ ಕೆಲಹೊತ್ತು ವಾಗ್ವಾದ ನಡೆಸಿದರು. ಹಿಂದುಗಳು ಪೂಜಿಸುವ ಗೋಮಾತೆಯನ್ನು ವಧೆ ಮಾಡುವ ಕೆಲಸ ಹಾಸನದಲ್ಲಿ ಅವ್ಯಾಹತವಾಗಿ ನಡೆಯುತ್ತಿದೆ. ಆದರೂ ಪೊಲೀಸರು ಕಣ್ಮುಚ್ಚಿ ಕುಳಿತಿದ್ದಾರೆ. ನಾವೇ ಖುದ್ದಾಗಿ ವಾಹನ ಅಡ್ಡಗಟ್ಟಿ ತಡೆದರೂ ವಶಕ್ಕೆ ಪಡೆಯಲು ಒಂದು ಗಂಟೆ ತಡವಾಗಿ ಸ್ಥಳಕ್ಕೆ ಬಂದರು. ಸುಮೊಟೊ ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಿಟ್ಟು ಕಳಿಸಿದ್ದಾರೆ. ಪೊಲೀಸರ ನಿರ್ಲಕ್ಷ್ಯದಿಂದ ಲಕ್ಷಾಂತರ ಹಿಂದುಗಳ ಭಾವನೆಗೆ ಧಕ್ಕೆಯುಂಟಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ವೃತ್ತ ನಿರೀಕ್ಷಕ ಗಂಗಾಧರಪ್ಪ ಅವರು, ಪೊಲೀಸರಿಗೆ ಕರ್ತವ್ಯ ಪ್ರಜ್ಞೆ ನೆನಪಿಸುವ ಅವಶ್ಯಕತೆಯಿಲ್ಲ. ಕಾನೂನು ಪ್ರಕಾರ ಏನು ಮಾಡಬೇಕೋ ಅದನ್ನು ಮಾಡುತ್ತೇವೆ. ಗೋಮಾಂಸ ಸಾಗಿಸುತ್ತಿದ್ದ ವಾಹನ ವಶಕ್ಕೆ ಪಡೆಯಲಾಗಿದೆ. ಪಶು ವೈದ್ಯಾಧಿಕಾರಿಗಳು ತಪಾಸಣೆ ನಡೆಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು. ನಿಮ್ಮ ದೂರುಗಳೇನೇ ಇದ್ದರೂ ಶಾಂತವಾಗಿ ಹೇಳಿಕೊಳ್ಳಬೇಕು. ಈ ರೀತಿ ಪ್ರತಿಭಟನೆ ನಡೆಸಿದರೆ ಸಹಿಸುವುದಿಲ್ಲವೆಂದು ಎಚ್ಚರಿಕೆ ನೀಡಿದರು.

ಆಗ ಆಕ್ರೋಶಗೊಂಡ ಪ್ರತಿಭಟನಾಕಾರರು, ನಮ್ಮ ಭಾವನೆಗೆ ಧಕ್ಕೆಯಾದರೂ ನೀವು ಗಂಭೀರವಾಗಿ ಪರಿಗಣಿಸುತ್ತಿಲ್ಲ. ಈ ವಿಚಾರದಲ್ಲಿ ನಮ್ಮ ಬಂಧನವಾದರೂ ಹೆದರುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಅರ್ಧ ಗಂಟೆಗೂ ಹೆಚ್ಚು ಸಮಯ ನಡೆದ ವಾಗ್ವಾದದ ಬಳಿಕ ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವುದಿಲ್ಲ, ಕಾನೂನು ಪ್ರಕಾರ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದ ಬಳಿಕ

### ಗೋವಿನ ಹನಿ ರಕ್ತವೂ ಬೀಳಬಾರದು

ಹಿಂದುಪರ ಸಂಘಟನೆ ಮುಖಂಡ ಲೋಕೇಶ್ ಮಾತನಾಡಿ, ಜನಪ್ರತಿನಿಯೊಬ್ಬರು ಕರೆ ಮಾಡಿದರೆಂದು ಆರೋಪಿಯನ್ನು ಪೊಲೀಸರು ಬಿಟ್ಟು ಕಳುಹಿಸಿದ್ದಾರೆ. ನಗರದಲ್ಲಿ ಅಕ್ರಮ ಗೋ ಹತ್ಯೆ ಹಾಗು ಮಾಂಸ ಸಾಗಾಟ ನಡೆಯುತ್ತಿದ್ದು ಪೊಲೀಸರು ಅದಕ್ಕೆ ಬ್ರೇಕ್ ಹಾಕಬೇಕು.

ಇಲ್ಲವಾದರೆ ಹಿಂದುಪರ ಕಾರ್ಯಕರ್ತರೇ ಅಕ್ರಮ ನಡೆಯುವ ಜಾಗಕ್ಕೆ ನುಗ್ಗಬೇಕಾಗುತ್ತದೆ. ಹಾಸನದಲ್ಲಿ ಇನ್ನು ಮುಂದೆ ಗೋವಿನ ಒಂದು ಹನಿ ರಕ್ತಮೂ ನೆಲಕ್ಕೆ ಬೀಳಬಾರದು ಎಂದರು.

# ಕಳಪೆ ಕಾಮಗಾರಿಯಿಂದ ಹದಗೆಟ್ಟ ರಸ್ತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಳೇಬೀಡು: ಇಲ್ಲಿನ ಕರಿಯಮ್ಮ ಬೀದಿ ಹಾಗೂ ಬ್ರಾಹ್ಮಣರ ಬೀದಿಯ ರಸ್ತೆಗಳಲ್ಲಿ ಡಾಂಬರಿಕರಣ ಮುಗಿದು 7 ತಿಂಗಳಲ್ಲಿ ಡಾಂಬರು ಕಿತ್ತು ರಸ್ತೆ ಸಂಪೂರ್ಣ ಗುಂಡಿಮಯವಾಗಿದ್ದು ಕಳಪೆ ಕಾಮಗಾರಿಗೆ ನೈಜ ಸಾಕ್ಷಿಯಾಗಿದೆ.

ಈ ರಸ್ತೆಗಳು ಜನವಸತಿ ಪ್ರದೇಶವನ್ನು ಹೊಂದಿವೆ. ರಸ್ತೆಯಲ್ಲಿ ಶಾಲಾ, ಕಾಲೇಜುಗಳಿವೆ. ಗ್ರಾಮ ದೇವತೆ ಕರಿಯಮ್ಮ ದೇವಾಲಯಕ್ಕೆ ನಿತ್ಯ ನೂರಾರು ಭಕ್ತರು ಬರುತ್ತಿದ್ದು ಗುಂಡಿಬಿದ್ದ ರಸ್ತೆಗಳೇ ಅವರನ್ನು ಸ್ವಾಗತಿಸುತ್ತಿವೆ. ಮುತ್ತಿನ ವೀರಭದ್ರಸ್ವಾಮಿ, ಕುಂಬಳೇಶ್ವರ ಹಾಗು ಕಸ್ತೂರಿ, ರಂಗನಾಥ ಸ್ವಾಮಿ ಎಂಬ ಹೊಯ್ಸಳರ ಕಾಲದ ದೇವಾಲಯಗಳು ರಸ್ತೆಯಲ್ಲಿವೆ. ಪ್ರವಾಸೋದ್ಯಮ ಇಲಾಖೆಯಿಂದ ಪ್ರಚಾರ ಕೈಗೊಂಡು ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಸದುದ್ದೇಶ ಇದೆ. ಯೊನೆಸ್ಕೊದವರು ಹಲವಾರು ಬಾರಿ ದೇವಾಲಯಗಳ ವಿಕ್ಷಣೆ ಮಾಡಿದ್ದಾರೆ. ಆದರೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಪ್ರಮುಖವಾದ ರಸ್ತೆಯಲ್ಲಿ ಕಳಪೆ ಕಾಮಗಾರಿ ಕೈಗೊಂಡಿದ್ದಾರೆಂದು ಬಸವೇಶ್ವರ ಬಳಗದ ಆಧ್ಯಕ್ಷ ಹೆಚ್.ಸಿ.ಚೇತನ್ ದೂರಿದ್ದಾರೆ. ಬೇಲೂರು ಮುಖ್ಯ ರಸ್ತೆಯಿಂದ ಬ್ರಾಹ್ಮಣರ ಬೀದಿ ಪ್ರವೇಶದಲ್ಲಿ 100 ಮೀಟರ್ ರಸ್ತೆ ಕಾಮಗಾರಿ ಮಾಡಿಲ್ಲ. ಕಾಲಕ್ರಮೇಣ ರಸ್ತೆಗೆ ಡಾಂಬರು ಹಾಕಿದ ಅವಶೇಷ ಇಲ್ಲದಂತೆ ಕಿತ್ತು ಹೋಗುವ ಸಾಧ್ಯತೆ ಇದೆ. ಕಾಮಗಾರಿಗೆ ಮಂಜೂರಾದ 1 ಕೋಟಿ ರೂ. ಅನಗತ್ಯ ವೆಚ್ಚವಾಗಿದೆ ಎಂದು ಸ್ಥಳೀಯರು ದೂರಿದ್ದಾರೆ.

ಲೋಕೋಪಯೋಗಿ ಇಲಾಖೆಯವರು ರಸ್ತೆ ಸರಿಪಡಿಸಿ, ಜನರ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ವಾರ್ಡ್ ಸದಸ್ಯ ಹೆಚ್.ಎಂ.ನಿಂಗಪ್ಪ ಅವರು ಆಗ್ರಹಿಸಿದ್ದಾರೆ.

ಈ ಕುರಿತು ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಕೃಷ್ಣೇಗೌಡ ಮಾತನಾಡಿ, ನಾನು ಬೇಲೂರು ತಾಲ್ಲೂಕಿಗೆ ಬರುವ ಮೊದಲೇ ಕಾಮಗಾರಿ ಮುಗಿದಿದೆ. ಶೀಘ್ರದಲ್ಲಿಯೇ ಸ್ಥಳ ಪರಿಶೀಲನೆ ನಡೆಸುತ್ತೇನೆ ಎಂದರು.

# ಹೋರಾಟಗಾರರ ವಿರುದ್ಧ ಕೇಸ್: ಪ್ರಜಾಪ್ರಭುತ್ವದ ಕಗ್ಗೊಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಸಕಲೇಶಪುರ: ಅರ್ಜುನ ಆನೆಯ ಸ್ಮಾರಕಕ್ಕಾಗಿ ಆಗ್ರಹಿಸಿದ್ದ ಹೋರಾಟಗಾರರ ವಿರುದ್ಧ ಪ್ರಕರಣ ದಾಖಲಿಸಿದ್ದು ಪ್ರಜಾಪ್ರಭುತ್ವದ ಕಗ್ಗೊಲೆ ಎಂದು ಮಾಜಿ ಸಚಿವ ಹೆಚ್.ಕೆ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಟಿಯಲ್ಲಿ ಶುಕ್ರವಾರ ಮಾತನಾಡಿ, ಅರ್ಜುನ ಆನೆಯ ಸಾವಿನ ನಿಖರ ಕಾರಣ ಇನ್ನೂ ತಿಳಿದಿಲ್ಲ. ಹೋರಾಟಗಾರರ ಮೇಲಿನ ಎಫ್‌ಐಆರ್ ನೋಡಿದರೆ ನಗು ಬರುತ್ತದೆ. ಯಾವುದೇ ಗಂಭೀರ ಆರೋಪಗಳಿಲ್ಲ. ಪೊಲೀಸ್ ಪೇದೆಯೊಬ್ಬರ ದೂರಿನ ಆಧಾರದಲ್ಲಿ 19 ಜನರ ಮೇಲೆ ಪ್ರಕರಣ ದಾಖಲಿಸಲಾಗಿದೆ. ಘಟನೆ ನಡೆದ ಸಮಯದಲ್ಲಿ ಆರೋಪಿಗಳಿಗೆ ಕನಿಷ್ಠ ನೋಟಿಸ್ ಅಥವಾ ಮಾಹಿತಿ ನೀಡಿಲ್ಲ. ಅಪರಾಧ ನಡೆದಿದ್ದರೆ ಆಗಲೇ ಕ್ರಮ ಕೈಗೊಳ್ಳಬೇಕಿತ್ತು. ಎರಡು ವರ್ಷ ಮೌನವಾಗಿದ್ದು, ಈಗ ಏಕಾಏಕಿ ಪ್ರಕರಣ ದಾಖಲಿಸಿರುವುದು ಸರ್ಕಾರದ ಉದ್ದೇಶವನ್ನು ಪ್ರಶ್ನಿಸುವಂತಿದೆ. ಆದರೆ ವರದಿ ಇಲ್ಲದೆ ರೈತರ ಮೇಲೆ ಪ್ರಕರಣ ದಾಖಲಿಸಿರುವುದು ರೈತ ವಿರೋಧಿ ಕ್ರಮವಾಗಿದೆ ಎಂದರು.

ಡಿ. 30ರಂದು ಆರೋಪಿಗಳು ನ್ಯಾಯಾಲಯಕ್ಕೆ ಹಾಜರಾಗಬೇಕಿದೆ. ಸರ್ಕಾರ ತಕ್ಷಣವೇ ಈ ಪ್ರಕರಣವನ್ನು ವಾಪಸ್ ಪಡೆಯಬೇಕು ಎಂದು ಮುಖ್ಯಮಂತ್ರಿ, ಅರಣ್ಯ ಸಚಿವರು ಹಾಗೂ ಗೃಹ ಸಚಿವರನ್ನು ಆಗ್ರಹಿಸಿದರು.

### ರಾಜ್ಯದಲ್ಲಿ ಮಿತಿ ಮೀರಿದ ಭ್ರಷ್ಟಾಚಾರ

ರಾಜ್ಯದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ. ಅಭಿವೃದ್ಧಿ ಸಂಪೂರ್ಣವಾಗಿ ಸ್ಥಗಿತಗೊಂಡಿದೆ ಎಂದು ಆರೋಪಿಸಿದ ಅವರು, ಗ್ಯಾರೆಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ಐದು ಗ್ಯಾರಂಟಿಗಳ ಹೆಸರಿನಲ್ಲಿ ಹಣ ಹಂಚುವುದರ ಹೊರತು ನಿಜವಾದ ಅಭಿವೃದ್ಧಿ ನಡೆದಿಲ್ಲ. ಗೃಹಲಕ್ಷ್ಮಿ ಯೋಜನೆಯ ಹಣವೇ ಏಳು ತಿಂಗಳಿಂದ ಬಂದಿಲ್ಲ ಎಂದು ಸರ್ಕಾರವೇ ಒಪ್ಪಿಕೊಂಡಿದೆ. ಆರೋಗ್ಯ, ಶಿಕ್ಷಣ ಮತ್ತು ಉದ್ಯೋಗ ಗ್ಯಾರೆಂಟಿಗಳ ಬಗ್ಗೆ ಯಾವುದೇ ಸ್ಪಷ್ಟತೆ ಇಲ್ಲ. ಸರ್ಕಾರ ರೈತ ವಿರೋಧಿ ನೀತಿಗಳನ್ನು ಕೈಬಿಟ್ಟು, ಜನಪರ ಆಡಳಿತ ನಡೆಸಬೇಕೆಂದು ಆಗ್ರಹಿಸಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಜಾತಹಳ್ಳಿ ಪುಟ್ಟಸ್ವಾಮಿಗೌಡ, ಪುರಸಭಾ ಮಾಜಿ ಅಧ್ಯಕ್ಷ ಕಾಡಪ್ಪ, ಮಲ್ನಾಡ್ ಜಾಕೀರ್, ಎಸ್.ಡಿ.ಸತೀಶ್ ಸಚಿನ್ ಪ್ರಸಾದ್, ಭಾಸ್ಕರ್ ಉಪಸ್ಥಿತರಿದ್ದರು.

# 24 ಲಕ್ಷ ರೂ. ವೆಚ್ಚದ ವೈದ್ಯಕೀಯ ಉಪಕರಣ ಕಳವು

## ಬೇಲೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಘಟನೆ | ಸಿಸಿಟಿವಿ ಕ್ಯಾಮರಾದಲ್ಲಿ ಕಳ್ಳತನ ದೃಶ್ಯ ಸೆರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ಇಲ್ಲಿನ ಸರ್ಕಾರಿ ಆಸ್ಪತ್ರೆಯಲ್ಲಿನ ಸುಮಾರು 24 ಲಕ್ಷ ರೂ. ಮೊತ್ತದ ವೈದ್ಯಕೀಯ ಉಪಕರಣಗಳು ನಾಪತ್ತೆಯಾಗಿದ್ದು ಕಳ್ಳತನದ ದೃಶ್ಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಸ್ಕ್ಯಾನಿಂಗ್ ಮಷೀನ್, ವೆಂಟಿಲೇಟರ್ ಮಾನಿಟರ್, ಆಕ್ಸಿಜನ್ ಸಿಲಿಂಡರ್‌ಗಳು ಕಳುವಾಗಿವೆ. ಕಳ್ಳತನದ ದೃಶ್ಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಯೊಬ್ಬರು ಸಿಸಿಟಿವಿ ಕ್ಯಾಮರಾ ಪರಿಶೀಲಿಸುವ ವೇಳೆ ವಿಚಾರ ತಿಳಿದಿದ್ದು ಖಾಸಗಿ ಆಂಬುಲೆನ್ಸ್ ಚಾಲಕ ಸುಫಿಯಾನ್ ಎಂಬಾತ ಕಳವು ನಡೆಸುವ ದೃಶ್ಯಗಳಿವೆ ಎನ್ನಲಾಗಿದೆ.

ಆದರೆ, ಆತನ ವಿರುದ್ಧ ಕ್ರಮ ಕೈಗೊಳ್ಳಬೇಕಿದ್ದ ಅಧಿಕಾರಿಗಳು ಜಾಣ ಮೌನ ವಹಿಸಿದ್ದಾರೆಂದು ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆಸ್ಪತ್ರೆಯಲ್ಲಿದ್ದ 6 ಲಕ್ಷ ರೂ. ಬೆಲೆ ಬಾಳುವ ಸ್ಕ್ಯಾನಿಂಗ್ ಮಷಿನ್, 5ಕ್ಕೂ ಹೆಚ್ಚು ವೆಂಟಿಲೇಟರ್ ಮಾನಿಟರ್‌ಗಳು ಹಾಗು 10ಕ್ಕೂ ಹೆಚ್ಚು ಆಕ್ಸಿಜನ್ ಸಿಲಿಂಡರ್‌ಗಳು ಕಾಣೆಯಾಗಿವೆ ಎಂದು ಕರವೇ ತಾಲ್ಲೂಕು ಅಧ್ಯಕ್ಷ ಚಂದ್ರಶೇಖರ್ ಆರೋಪಿಸಿದರು.

ತಾಲ್ಲೂಕಿನ ಬಡವರಿಗೆ ಅನುಕೂಲವಾಗಲೆಂದು ಸರ್ಕಾರದಿಂದ ಉಪಕರಣಗಳನ್ನು ನೀಡಿದ್ದರೆ ಅಧಿಕಾರಿಗಳು ಅಕ್ರಮದಲ್ಲಿ ಶಾಮೀಲಾಗಿ ಖಾಸಗಿ ಆಂಬುಲೆನ್ಸ್ ಚಾಲಕನ ಸಹಾಯದಿಂದ ಕಳ್ಳತನದಲ್ಲಿ ಭಾಗಿಯಾಗಿದ್ದಾರೆ. ತಾಲ್ಲೂಕಿನ ಜನರ ಉಪಯೋಗಕ್ಕಾಗಿ ಹೋರಾಟ ಮಾಡಿದ್ದಕ್ಕೆ ಸ್ಕ್ಯಾನಿಂಗ್ ಮಷೀನ್ ಮಂಜೂರಾಗಿತ್ತು ಎಂದರು.

ಕಳ್ಳತನ ಆರೋಪಿಗೆ ನೆಪಮಾತ್ರಕ್ಕೆ ನೋಟೀಸ್ ಜಾರಿ ಮಾಡಿ ಪ್ರಕರಣ ಮುಚ್ಚಿ ಹಾಕುವ ಹುನ್ನಾರ ನಡೆದಿದೆ. ತಪ್ಪಿತಸ್ಥರ ಅಧಿಕಾರಿಗಳ ವಿರುದ್ಧವೂ ಕ್ರಮ ಜರುಗಿಸಬೇಕು. ಇಲ್ಲವಾದರೆ ಹೋರಾಟ ತೀವ್ರಗೊಳಿಸಲಾಗುವುದೆಂದು ಅವರು ಎಚ್ಚರಿಕೆ ನೀಡಿದರು.

ಕರವೇ ಪ್ರಧಾನ ಕಾರ್ಯದರ್ಶಿ ಅಬ್ದುಲ್ ಖಾದರ್ ಮಾತನಾಡಿ, ಬೇಲೂರು ಸರ್ಕಾರಿ ಆಸ್ಪತ್ರೆಯ ಸಮಸ್ಯೆಗಳು ಹಲವು ವರ್ಷಗಳಿಂದ ಇವೆ. ಜನರ ಪರವಾಗಿ ಕರವೇ ಹೋರಾಟ ನಡೆಸುತ್ತಲೇ ಇದೆ. ಜನರಿಗೆ ಉಪಯೋಗವಾಗಬೇಕಿದ್ದ ಸ್ಕ್ಯಾನಿಂಗ್ ಮಷೀನ್ ಕಳ್ಳತನವಾಗಿದ್ದರೂ ಅಧಿಕಾರಿಗಳು ಮೌನವಾಗಿರುವುದು ಅನುಮಾನ ಹುಟ್ಟಿಸಿದೆ ಎಂದರು.

ಕರವೇ ಗೌರವಾಧ್ಯಕ್ಷ ಜಗದೀಶ್, ತಾಲ್ಲೂಕು ಯುವ ಘಟಕ ಅಧ್ಯಕ್ಷ ಮೋಹನ್ ಗೌಡ, ಮಾಧ್ಯಮ ಸಲಹೆಗಾರ ದಿನೇಶ್ ಬೆಳ್ಳಾವರ, ಪ್ರಗತಿ ಲೋಕೇಶ್ ಹಾಗು ಇತರರಿದ್ದರು.

# ಬೆಳೆ ನಷ್ಟ ಪರಿಹಾರ ಹೆಚ್ಚಳಕ್ಕೆ ಶಾಸಕ ಸಿಮೆಂಟ್ ಮಂಜು ಆಗ್ರಹ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಳಗಾವಿ: ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ಕಂಗಾಲಾಗಿರುವ ರೈತರಿಗೆ ನೀಡುವ ಪರಿಹಾರ ಮೊತ್ತದಲ್ಲಿ ಹೆಚ್ಚಳ ಮಾಡಬೇಕು ಎಂದು ಶಾಸಕ ಸಿಮೆಂಟ್ ಮಂಜು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಬೆಳಗಾವಿಯ ಸುವರ್ಣಸೌಧದಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಮಾತನಾಡಿ, ಸಕಲೇಶಪುರ ವಿಧಾನಸಭಾ ಕ್ಷೇತ್ರ ಮಲೆನಾಡು, ಅರೆ ಮಲೆನಾಡು, ಬಯಲು ಸೀಮೆಯನ್ನು ಒಳಗೊಂಡಿದೆ. ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿಯೂ ಹವಾಮಾನ ವೈಪರೀತ್ಯ ಪರಿಣಾಮ ಬೀರುತ್ತಿದೆ.

ಮಲೆನಾಡು ಭಾಗದ ಸಕಲೇಶಪುರ ತಾಲೂಕಿನಲ್ಲಿ ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆ ಬಿದ್ದಿದ್ದು, ಕೃಷಿ, ತೋಟಗಾರಿಕಾ ಬೆಳೆಗೆ ಹಾನಿ ಸಂಭವಿಸಿದೆ. ಅದರಿಂದ ರೈತರು ಆರ್ಥಿಕವಾಗಿ ದುರ್ಬಲರಾಗುತ್ತಿದ್ದಾರೆ. ಈ ವರ್ಷ ಸುರಿದ ಭಾರೀ ಮಳೆ ಮತ್ತು ರೋಗದಿಂದ ಕ್ಷೇತ್ರದ ಪ್ರಮುಖ ಬೆಳೆಗಳಾದ ಜೋಳ, ಕಾಫಿ, ಕಾಳು ಮೆಣಸು, ಏಲಕ್ಕಿ ಹಾಗೂ ಅಡಿಕೆ ಬೆಳೆ ಭಾಗಶ: ನಷ್ಟವಾಗಿದೆ. ಹಾಸನ ತಾಲ್ಲೂಕು ವ್ಯಾಪ್ತಿಯಯಲ್ಲಿ ರೈತರ ಆರ್ಥಿಕ ಬೆಳೆಯಾದ ಮುಸುಕಿನ ಜೋಳದ ಬೆಳೆಗೆ ಬಿಳಿ ಸುಳಿ ರೋಗ ಕಾಣಿಸಿಕೊಂಡು ಬೆಳೆ ನಾಶವಾಗುತ್ತಿರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಹುತೇಕ ಸಣ್ಣ ಮತ್ತು ಅತಿ ಸಣ್ಣ ರೈತರೇ ತಾಲ್ಲೂಕಿನಲ್ಲಿದ್ದು, ಸಾಲ ಮಾಡಿ ಜೋಳ ಖರೀದಿ ಮಾಡಿ ಬಿತ್ತನೆ ಮಾಡಿದ್ದಾರೆ.

ಆದ್ದರಿಂದ ಸರ್ಕಾರ ಕೂಡಲೇ ರೈತರ ನೆರವಿಗೆ ಧಾವಿಸಿ ಸೂಕ್ತ ಪರಿಹಾರ ಧನ ಬಿಡುಗಡೆಗೊಳಿಸಬೇಕೆಂದು ಒತ್ತಾಯಿಸಿದರು.

ಮಲೆನಾಡಿನ ಮುಖ್ಯ ವಾಣಿಜ್ಯ ಬೆಳೆ ಕಾಫಿಯೂ ಕಳೆದ ವರ್ಷ ಮಳೆ ಕೊರತೆಯಿಂದ ನಷ್ಟ ಅನುಭವಿಸಿದ ಕಾಫಿ ಬೆಳೆಗಾರರು, ಈ ಬಾರಿ ವಿಪರೀತ ಮಳೆ ಹಾಗೂ ಶೀತದಿಂದ ಶೇ. 50ರಷ್ಟು ನಷ್ಟ ಅನುಭವಿಸುವ ಆತಂಕದಲ್ಲಿದ್ದಾರೆ. ಮಳೆ ಬಂದು ನಿಂತಿದ್ದರೂ ಮುಂದಿನ ದಿನಗಳಲ್ಲಿ ಕೊಳೆ ರೋಗಕ್ಕೆ ಸಾಕಷ್ಟು ಕಾಫಿ ಬೆಳೆ ನಷ್ಟ ಸಂಭವಿಸುವ ಸಾಧ್ಯತೆ ಇದೆ. ಪ್ರತಿ ಎಕರೆಗೆ ಸರ್ಕಾರ 8 ಸಾವಿರ ರೂ. ಪರಿಹಾರ ನೀಡುತ್ತಿದ್ದು, ಎಕರೆಗೆ ಲಕ್ಷಾಂತರ ರೂ. ಆದಾಯ ಗಳಿಸುವ ಬೆಳೆಗಾರರಿಗೆ ಈಗ ಸರ್ಕಾರ ನೀಡುತ್ತಿರುವ ಅಲ್ಪ ಮೊತ್ತದ ಪರಿಹಾರ ಆನೆ ಹೊಟ್ಟೆಗೆ ಅರೆ ಕಾಸಿನ ಮಜ್ಜಿಗೆ ಎಂಬಂತಾಗಿದೆ. ಸರ್ಕಾರ ಕೂಡಲೇ ಅಧಿಕಾರಿಗಳಿಂದ ನಷ್ಟದ ಮಾಹಿತಿ ಪಡೆದು ವೈಜ್ಞಾನಿಕವಾಗಿ ಪರಿಹಾರ ಘೋಷಣೆ ಮಾಡುವಂತೆ ಒತ್ತಾಯಿಸಿದರು.

# ಉರ್ದು ಅಕಾಡೆಮಿ ಉತ್ತೇಜನಕ್ಕೆ ಸರ್ಕಾರ ಸಹಕರಿಸಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಉರ್ದು ಅಕಾಡೆಮಿಗೆ ರಾಜ್ಯ ಸರ್ಕಾರ ನೀಡುತ್ತಿರುವ ವಾರ್ಷಿಕ ಅನುದಾನವನ್ನು ಹೆಚ್ಚಿಸಬೇಕು ಎಂದು ರಾಜ್ಯ ಉರ್ದು ಅಕಾಡೆಮಿ ಅಧ್ಯಕ್ಷ ಮೌಲಾನ ಮುಫ್ತಿ ಮೊಹಮ್ಮದ್ ಆಲಿ ಖಾಜಿ ಆಗ್ರಹಿಸಿದರು.

ನಗರದ ತಾಜ್ ಸಮುದಾಯ ಭವನದಲ್ಲಿ ಕರ್ನಾಟಕ ಉರ್ದು ಅಕಾಡೆಮಿ ವತಿಯಿಂದ ಆಯೋಜಿಸಿದ್ದ ಉರ್ದು ಕವಿಗೋಷ್ಠಿಯಲ್ಲಿ ಮಾತನಾಡಿ, ಸರ್ಕಾರ ಪ್ರತಿ ವರ್ಷ ಕೇವಲ 2 ಕೋಟಿ ರೂ. ನೀಡುತ್ತಿದೆ. ಅದರಿಂದ ಹೆಚ್ಚು ಕಾರ್ಯಕ್ರಮ ಆಯೋಜಿಸಲು ಸಾಧ್ಯವಾಗುತ್ತಿಲ್ಲ. ದಾನಿಗಳ ನೆರವಿನಿಂದ ಸಣ್ಣ ಪುಟ್ಟ ಕಾರ್ಯಕ್ರಮಗಳನ್ನು ಅಕಾಡೆಮಿ ವತಿಯಿಂದ ಮಾಡಲಾಗುತ್ತಿದೆ.

ಸರ್ಕಾರ ಗಮನ ಹರಿಸಿ ಅಕಾಡೆಮಿಗೆ ಹೆಚ್ಚಿನ ಅನುದಾನ ನೀಡಬೇಕು. ಹಾಗಾದರೆ ತಾಲ್ಲೂಕು ಮಟ್ಟದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಕರ್ನಾಟಕ ರಾಜ್ಯ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ.ಮದನ್ ಗೌಡ ಮಾತನಾಡಿ, ಭಾಷೆ ಮತ್ತು ಕಾವ್ಯಕ್ಕೆ ಯಾವ ಮತ್ಸರವಿಲ್ಲ. ಸಾಹಿತ್ಯಕ್ಕೆ ಯಾವ ಗಡಿಗಳಿಲ್ಲ. ಭಾಷೆಯ ಬೆಳವಣಿಗೆಗೆ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಿದೆ. ಇತ್ತೀಚಿನ ವರ್ಷಗಳಲ್ಲಿ ಉರ್ದು ಶಾಲೆಗಳಿಗೆ ಮಕ್ಕಳ ದಾಖಲಾತಿಯಲ್ಲಿ ಇಳಿಕೆಯಾಗುತ್ತಿರುವುದನ್ನು ಕಾಣಬಹುದು.

ಶಾಲಾ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದೆ. ವಿದ್ಯಾರ್ಥಿಗಳ ದಾಖಲಾತಿ ಹೆಚ್ಚದಿದ್ದರೆ ಶಾಲೆ ಮುಚ್ಚಲಿವೆ. ಉರ್ದು ಭಾಷಾ ಶಿಕ್ಷಣ ಉಳಿವಿಗಾಗಿ ಪೋಷಕರು ಮಕ್ಕಳನ್ನು ಉರ್ದು ಶಾಲೆಗಳಿಗೆ ದಾಖಲು ಮಾಡಬೇಕು ಎಂದು ಸಲಹೆ ನೀಡಿದರು

ಹೀಗಾಗಿ ಉರ್ದು ಶಾಲೆಗಳಿಗೆ ಮಕ್ಕಳನ್ನು ದಾಖಲಾತಿ ಮಾಡಲು ಪೋಷಕರು ಮುಂದಾಗಬೇಕು. ಉರ್ದು ಕವಿಗೋಷ್ಠಿ ಗಳು ಪ್ರತಿ ತಾಲ್ಲೂಕು ಮಟ್ಟದಲ್ಲಿ ನಡೆಯಬೇಕು, ಆಗ ಮಾತ್ರ ಭಾಷೆಯ ಬೆಳವಣಿಗೆ ಸಾಧ್ಯ ಎಂದರು.

ಪತ್ರಕರ್ತ ಜಮೀಲ್ ಅಹಮ್ಮದ್, ಸರ್ಕಾರಿ ಶಾಲೆ ಶಿಕ್ಷಕಿ ಮುಬೀನಾ ಕೌಸರ್ ಅವರನ್ನು ಅಕಾಡೆಮಿ ವತಿಯಿಂದ ಸನ್ಮಾನಿಸಲಾಯಿತು.

ರಾಜ್ಯ, ಹೊರ ರಾಜ್ಯ ಹಾಗೂ ಜಿಲ್ಲೆಯ ಹಲವಾರು ಕವಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಉರ್ದು ಅಕಾಡೆಮಿ ಜಿಲ್ಲಾ ಮುಖಂಡರಾದ ಅನ್ವರ್ ಖಾನ್, ಡಾ. ಅಖ್ತರ್ ಸೈಯ್ಯದಾ ಖಾನಮ್, ಸಯ್ಯದ್ ಸಜ್ಜದ್ ಪಾಷಾ, ಅತಿಕ್ ಉರ್ ರೆಹಮಾನ್, ಕಾರ್ಯದರ್ಶಿ ನಿಜಾಮುದ್ದೀನ್ ಶಾದಾಬ್, ಸೈಯದ್ ತಾಜ್, ಜಲೀಲ್ ಅಹ್ಮದ್, ಮೊಹ್ಮದ್ ಇಸಾಖ್, ಇಬ್ರಾಹಿಂ, ಆಜಾಂ ಖಾನ್, ಅಬ್ದುಲ್ ಮಾಜಿದ್ ಸೇರಿ ಇತರರು ಹಾಜರಿದ್ದರು.

# ಆತ್ಮ ಪರಿಶುದ್ಧವಾಗಿದ್ದರೆ ಬದುಕು ಸುಂದರ : ಶಂಭುನಾಥ ಶ್ರೀ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಸಮಾಜ ಹಾಗೂ ತನ್ನ ಬದುಕಿನ ಬಗ್ಗೆ ಸದಾ ಚಿಂತನೆ ಮಾಡುವ ವ್ಯಕ್ತಿಯು ಅನ್ಯರಿಗೆ ಎಂದಿಗೂ ಕೇಡು ಬಯಸುವುದಿಲ್ಲ ಎಂದು ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ತಾಲೂಕಿನ ಪುರಾಣ ಪ್ರಸಿದ್ಧ ಕುಂದೂರು ಶ್ರೀ ಆದಿಚುಂಚನಗಿರಿ ಮಠದಲ್ಲಿ ಅಮಾವಾಸ್ಯೆ ಪ್ರಯುಕ್ತ ಶ್ರೀ ಮೆಳಿಯಮ್ಮ ದೇವಿಗೆ ಅಲಂಕಾರ, ಹೋಮ-ಹವನ ಹಾಗೂ ವಿಶೇಷ ಪೂಜಾ ಕೈಂಕರ್ಯಗಳನ್ನು ನೇರವೇರಿಸಿ ಮಾತನಾಡಿ, ಆತ್ಮ ಪರಿಶುದ್ಧವಾಗಿದ್ದರೆ ಬದುಕು ಸುಂದರವಾಗಿರುತ್ತದೆ ಎಂದರು. ಒಳ್ಳೆಯ ಕೆಲಸ-ಕಾರ್ಯಗಳನ್ನು ಮಾಡಿ ನಾಲ್ಕು ಜನರ ಸ್ನೇಹ ಸಂಪಾದಿಸಿದರೆ ಬದುಕಿನುದ್ದಕ್ಕೂ ಜೊತೆ ಬರಲಿದ್ದಾರೆ. ಧರ್ಮ ಕಾರ್ಯಗಳಲ್ಲಿ ತೊಡಗಿ ಪುಣ್ಯ ಗಳಿಸಿದರೆ ಕಾಲದ ನಂತರವೂ ಸ್ವರ್ಗದ ಬಾಗಿಲ ವರೆಗೂ ಹಿಂಬಾಲಿಸಲಿದೆ. ಇದರಿಂದ ಬದುಕು ಮುಕ್ತಿ ಹೊಂದಲಿದೆ ಎಂದರು.

ಮನೆಯನ್ನು ಬೆಳಗಿಸಬೇಕೆಂದೇ ದೀಪ ಹೊತ್ತಿಸಿದರೆ ಅದು ಸದಾ ಪ್ರಜ್ವಲಿಸಲಿದೆ. ಅದನ್ನೇ ಕೆಡುಕಿಗಾಗಿ ಬಳಸಿದರೆ ಕೆನ್ನಾಲಿಗೆ ಚಾಚಿ ಮನೆಯನ್ನೇ ಆಹುತಿ ಪಡೆಯಲಿದೆ. ಹಾಗೆಯೇ ಮನುಷ್ಯ ತನ್ನ ಬದುಕನ್ನು ಸಮಾಜದ ಏಳಿಗೆಗಾಗಿ ಮುಡುಪಾಗಿಟ್ಟರೆ ನಿಮ್ಮ ಹೆಸರು ಚಿರವಾಗಿ ಉಳಿಯಲಿದೆ. ಆದರೆ ಸ್ವಾರ್ಥಕ್ಕಾಗಿ ಉಪಯೋಗಿಸಿಕೊಂಡರೆ ಬದುಕು ನಿಂತ ನೀರಾಗಲಿದೆ ಎಂದು ಎಚ್ಚರಿಸಿದರು.

ಅಮಾವಾಸ್ಯೆ ವ್ರತದ ಹಿನ್ನೆಲೆ ದೇಗುಲಕ್ಕೆ ಹಸಿರು ಚಪ್ಪರ ಹಾಕಲಾಗಿದ್ದು ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಅಮ್ಮನವರಿಗೆ ವಿಶೇಷ ಅಲಂಕಾರ ಜರಗಿದ್ದು ಹೋಮ, ಹವನ ಹಾಗೂ ವಿಶೇಷ ಪೂಜಾ ವಿಧಿ ವಿಧಾನಗಳನ್ನು ಶ್ರೀಗಳು ನೆರವೇರಿಸಿದರು. ಶ್ರೀಕ್ಷೇತ್ರ ಕಬ್ಬಳಿ ಶಾಖಾ ಮಠದ ಶ್ರೀ ಶಿವಪುತ್ರನಾಥ ಸ್ವಾಮೀಜಿ ಹಾಗೂ ಭಕ್ತರು ಪಾಲ್ಗೊಂಡಿದ್ದರು.

# ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಶಿಕ್ಷಣ ಇಲಾಖೆ ಸನ್ನದ್ಧ

## ಮಾ. 18 ರಿಂದ ಪರೀಕ್ಷೆ ಆರಂಭ | ರಿಸಲ್ಟ್ ಲಿಸ್ಟ್‌ನಲ್ಲಿ ನಂ.1 ಆಗಲು ಶ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಈ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಬರಬೇಕೆಂಬ ನಿಟ್ಟಿನಲ್ಲಿ ಅವಿರತ ಶ್ರಮ ವಹಿಸುತ್ತಿರುವ ಸಾರ್ವಜನಿಕ ಶಿಕ್ಷಣ ಇಲಾಖೆ ಇದೇ ಮೊದಲ ಬಾರಿಗೆ 4 ಪ್ರಾಯೋಗಿಕ ಪರೀಕ್ಷೆ ನಡೆಸಲು ಸಿದ್ಧತೆ ನಡೆಸಿದೆ.

ಶಿಕ್ಷಣ ಇಲಾಖೆಯೇ ನಡೆಸುವ 3 ಪೂರ್ವ ಸಿದ್ಧತಾ ಪರೀಕ್ಷೆಗಳ ಹೊರತಾಗಿ ಹೆಚ್ಚುವರಿಯಾಗಿ 4 ಪರೀಕ್ಷೆಗಳನ್ನು ನಡೆಸುವ ಮೂಲಕ ಮಕ್ಕಳಲ್ಲಿ ಪರೀಕ್ಷಾ ಭಯ ಹೋಗಲಾಡಿಸಲು ಕ್ರಮ ಕೈಗೊಳ್ಳಲಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ಶಿಕ್ಷಕರು, ಇಲಾಖೆ ಅಧಿಕಾರಿಗಳು ಮುತುವರ್ಜಿಯಿಂದ ಕೆಲಸ ಮಾಡುತ್ತಿದ್ದಾರೆ. ಡಿಸೆಂಬರ್ ಅಂತ್ಯಕ್ಕೆ ಪಠ್ಯ ಬೋಧನೆ ಮುಗಿಯಲಿದ್ದು ಮುಂದಿನ ಮೂರು ತಿಂಗಳು ಎಸ್‌ಎಸ್‌ಎಲ್‌ಸಿ ಮಕ್ಕಳನ್ನು ಸಂಪೂರ್ಣ ಪರೀಕ್ಷೆಯಲ್ಲಿ ಮಗ್ನರಾಗಿರುವಂತೆ ನೋಡಿಕೊಳ್ಳಲಾಗುತ್ತಿದೆ.

### ಈ ಬಾರಿ 19,800 ವಿದ್ಯಾರ್ಥಿಗಳು

ಜಿಲ್ಲೆಯಲ್ಲಿ 240 ಸರ್ಕಾರಿ, 39 ಮುರಾರ್ಜಿ ದೇಸಾಯಿ ವಸತಿ ಶಾಲೆ, ಅನುದಾನಿತ 118 ಹಾಗೂ 142 ಖಾಸಗಿ ಸೇರಿ 539 ಪ್ರೌಢ ಶಾಲೆಗಳಿದ್ದು ಒಟ್ಟು 19,800 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲು ಸಜ್ಜಾಗಿದ್ದಾರೆ. ಮಾ. 18 ರಿಂದ ರಾಜ್ಯಾದ್ಯಂತ ಪರೀಕ್ಷೆಗಳು ಪ್ರಾರಂಭವಾಗಲಿವೆ. ಈಗಾಗಲೇ ಎಫ್1, ಎಫ್2, ಎಫ್3 ಪರೀಕ್ಷೆ ಮುಗಿದಿದ್ದು ಜನವರಿಯಲ್ಲಿ ಎಫ್4 ಪರೀಕ್ಷೆ ನಡೆಯಲಿದೆ. ಈ ಪರೀಕ್ಷೆಗಳಲ್ಲಿ ವಿಷಯವಾರು ಕಡಿಮೆ ಅಂಕ ಗಳಿಸುವ ವಿದ್ಯಾರ್ಥಿಗಳನ್ನು ಕೇಂದ್ರೀಕರಿಸಿ ತರಬೇತಿ ನೀಡಲು ನಿರ್ಧರಿಸಲಾಗಿದೆ.

ಕಳೆದ ವರ್ಷ ರಾಜ್ಯಕ್ಕೆ 3ನೇ ಸ್ಥಾನ ಪಡೆದಿದ್ದ ಹಾಸನ ಈ ಬಾರಿ ನಂಬರ್ 1ರಲ್ಲಿರಬೇಕೆನ್ನುವುದು ಇಲಾಖೆ ಅಧಿಕಾರಿಗಳ ಗುರಿಯಾಗಿದೆ. ಶೂನ್ಯ ಫಲಿತಾಂಶ ಸಾಧಿಸುವ ಶಾಲೆಗಳ ಸಂಖ್ಯೆಯಲ್ಲಿ ಜಿಲ್ಲೆಯಲ್ಲಿ ಇಲ್ಲದೆ ಇರುವುದರಿಂದ ಈ




ಬಾರಿಯೂ ಒಂದು ಮಗು ಕೂಡ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಬಾರದು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳನ್ನು ತಯಾರು ಮಾಡಬೇಕೆಂದು ಶಾಲಾ ಶಿಕ್ಷಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ ಅವರು ಈಗಾಗಲೇ ಎರಡು ಮಹತ್ವದ ಸಭೆ ನಡೆಸಿದ್ದಾರೆ. ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರ ನೇತೃತ್ವದಲ್ಲಿ ಮುಖ್ಯ ಶಿಕ್ಷಕರು ಹಾಗು ಸಹ ಶಿಕ್ಷರ ಸಭೆಗಳು ಸರಣಿಯೋಪಾದಿಯಲ್ಲಿ ನಡೆದಿವೆ. ನ. 4 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಸಹ ಅಧಿಕಾರಿಗಳ ಸಭೆ ನಡೆಸಿ ಸಲಹೆ ಸೂಚನೆ ನೀಡಿದ್ದಾರೆ. ಮುಖ್ಯ ಶಿಕ್ಷಕರ ನೇತೃತ್ವದಲ್ಲಿ ಪೋಷಕರ ಸಭೆಯನ್ನು ಎಲ್ಲಾ ಶಾಲೆಗಳಲ್ಲಿ ಮಾಡಲಾಗಿದೆ.

ಮಾದರಿ ಪ್ರಶ್ನೆ ಪತ್ರಿಕೆ, ಕ್ವಷನ್ ಬ್ಯಾಂಕ್, ಪೂರ್ವ ಸಿದ್ಧತಾ ಪರೀಕ್ಷೆ, ಸುಲಭವಾಗಿ ಅಂಕ ಗಳಿಸುವ ವಿಧಾನ, ಪರೀಕ್ಷಾ ಸಮಯದಲ್ಲಿ ಮಕ್ಕಳು ಪಾಲಿಸಬೇಕಾದ ನಿಯಮಗಳ ಕುರಿತು ಶಿಕ್ಷಕರು ಹೇಳಿಕೊಟ್ಟಿದ್ದಾರೆ.

> ಮಾ. 18 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭವಾಗಲಿದ್ದು, ಎಲ್ಲಾ ಸಿದ್ಧತೆ ಕೈಗೊಳ್ಳಲಾಗಿದೆ. ಶಿಕ್ಷಣ ಇಲಾಖೆ ಈ ಬಾರಿ ಮೂರು ಪೂರ್ವ ಸಿದ್ಧತಾ ಪರೀಕ್ಷೆ ನಡೆಸಲು ಸೂಚಿಸಿದೆ. ಹೆಚ್ಚುವರಿಯಾಗಿ ನಾಲ್ಕು ಪರೀಕ್ಷೆಗಳನ್ನು ನಡೆಸುತ್ತೇವೆ. ಫಲಿತಾಂಶ ಸುಧಾರಣೆಗೆ ಎಲ್ಲಾ ಕ್ರಮ ಕೈಗೊಳ್ಳಲಾಗಿದೆ.
>
> **- ಬಲರಾಮ್, ಡಿಡಿಪಿಐ**



### ಮಕ್ಕಳಿಗೆ ಪತ್ರ ಬರೆದ ಶಿಕ್ಷಣಾಧಿಕಾರಿಗಳು

ಎಸ್‌ಎಸ್‌ಎಲ್‌ಸಿ ಪರೀಕ್ಷೆ ಜೀವನದ ಮಹತ್ತರ ಘಟ್ಟವಾಗಿದ್ದು ವಿದ್ಯಾರ್ಥಿಗಳು ಆಸಕ್ತಿಯಿಂದ ವ್ಯಾಸಂಗ ಮಾಡಿ ಉತ್ತಮ ಅಂಕ ಗಳಿಸುವ ಮೂಲಕ ಹೆತ್ತವರು ಹಾಗೂ ಕಲಿತ ಶಾಲೆಗೆ ಕೀರ್ತಿ ತರಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮಕ್ಕಳಿಗೆ ವೈಯಕ್ತಿಕ ಪತ್ರ ಬರೆದಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಮಕ್ಕಳ ವ್ಯಾಸಂಗದ ಕುರಿತು ಅಷ್ಟೇನು ಗಂಭೀರವಾಗಿ ಪರಿಗಣಿಸದೆ ವಿದ್ಯಾರ್ಥಿಗಳನ್ನು ಮನೆಗೆಲಸಕ್ಕೆ ಬಳಸುವುದು, ನಾಳೆ ಓದಿದರಾಯಿತು ಎಂಬ ಅಸಡ್ಡೆಯಿಂದ ಮೊಬೈಲ್, ಟಿವಿ ವೀಕ್ಷಣೆ, ಆಟೋಟಗಳಲ್ಲಿ ಭಾಗವಹಿಸುವುದು ಸೇರಿ ಇತರ ಚಟುವಟಿಕೆಗಳಲ್ಲಿ ತೊಡಗುವ ಸಾಧ್ಯತೆಗಳು ಹೆಚ್ಚಿರುತ್ತವೆ. ಪೋಷಕರು ಅದಕ್ಕೆ ಆಸ್ಪದ ನೀಡದೆ ಮುಂದಿನ ಮೂರು ತಿಂಗಳು ಮಕ್ಕಳನ್ನು ವ್ಯಾಸಂಗದಲ್ಲಿ ತೊಡಗುವಂತೆ ನೋಡಿಕೊಳ್ಳಬೇಕೆಂದು ಪತ್ರದಲ್ಲಿ ತಿಳಿಸಿದ್ದಾರೆ. ಜೊತೆಗೆ ಮುಖ್ಯ ಶಿಕ್ಷರು ಹಾಗು ಅಧಿಕಾರಿಗಳು ವಿದ್ಯಾರ್ಥಿಗಳ ಮನೆಗೆ ದಿಢೀರ್ ಭೇಟಿ ನೀಡಿ ಕಲಿಕಾ ಪ್ರಗತಿ ಪರಿಶೀಲಿಸುತ್ತಿದ್ದಾರೆ. ತರಗತಿ ಮುಗಿದ ಬಳಿಕ ಪರಿಹಾರ ಬೋಧನೆ, ಗುಂಪು ಚರ್ಚೆ, ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಶಿಕ್ಷಕರೇ ದತ್ತು ಪಡೆಯುವುದು ಹೀಗೆ ನಾನಾ ಚಟುವಟಿಕೆಗಳ ಮೂಲಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಗಳಿಸಲು ಶಕ್ತಿಮೀರಿ ಶ್ರಮಿಸಲಾಗುತ್ತಿದೆ.

# ಡಿ. 2ರ ವರೆಗೆ ಜಾನುವಾರುಗಳಿಗೆ ಲಸಿಕಾ ಅಭಿಯಾನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಕಲಗೂಡು: ತಾಲ್ಲೂಕಿನಲ್ಲಿ ಡಿ. 2ರ ವರೆಗೆ ನಡೆದ ಜಾನುವಾರುಗಳಿಗೆ ಕಾಲು ಬಾಯಿ ಲಸಿಕಾ ಆಂದೋಲನದಲ್ಲಿ ಶೇ. 95 ಗುರಿ ಸಾಧನೆಯಾಗಿದೆ ಎಂದು ಪಶು ವೈದ್ಯಕೀಯ ಇಲಾಖೆ ಸಹಾಯಕ ನಿರ್ದೇಶಕ ಡಾ. ದಿಲೀಪ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ತಾಲೂಕಿನಲ್ಲಿ81,182 ಜಾನುವಾರುಗಳಿದ್ದು 75,020 ಜಾನುವಾರುಗಳಿಗೆ ಲಸಿಕೆ ಹಾಕಲಾಗಿದೆ. ಈ ತಿಂಗಳ ಅಂತ್ಯದೊಳಗೆ ಶೇ. 100 ಗುರಿ ಸಾಧನೆ ಪೂರ್ಣಗೊಳಿಸಲಾಗುವುದು. 30 ಸಾವಿರ ಕುರಿಗಳಿಗೆ ಪಿಪಿಸಿ ಲಸಿಕೆ ನೀಡಲಾಗಿದೆ ಎಂದರು. ತಾಲೂಕಿನಲ್ಲಿ 24 ಪಶು ಆಸ್ಪತ್ರೆಗಳಿದ್ದು ಎಲ್ಲವೂ ಸ್ವಂತ ಕಟ್ಟಡ ಹೊಂದಿದೆ. ವೈದ್ಯರು ಮಾತ್ರ 5 ಮಂದಿ ಇದ್ದು ಸರದಿಯ ಮೇಲೆ ಎಲ್ಲ ಆಸ್ಪತ್ರೆಗಳಲ್ಲಿ ಚಿಕಿತ್ಸಾ ಸೌಲಭ್ಯ ದೊರೆಯುವಂತೆ ನೋಡಿಕೊಳ್ಳಲಾಗುತ್ತಿದೆ. ಅಂಬುಲೆನ್ಸ್ ವ್ಯವಸ್ಥೆ ಇದ್ದು ತುರ್ತು ಸಂದರ್ಭಗಳಲ್ಲಿ 1962 ಸಹಾಯವಾಣಿಗೆ ಕರೆ ಮಾಡಿದರೆ ಮನೆ ಬಾಗಿಲಿಗೆ ಬಂದು ಉಚಿತವಾಗಿ ಚಿಕಿತ್ಸೆ ನೀಡಲಾಗುವುದು. ಬೆಳಿಗ್ಗೆ 9 ರಿಂದ ಸಂಜೆ 5ರ ವರೆಗೆ ಈ ಸೌಲಭ್ಯ ದೊರೆಯಲಿದೆ. ರೇಬೀಸ್ ಕುರಿತು ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯ ನಡೆಸಲಾಗಿದೆ. 2349 ಪ್ರಾಣಿಗಳಿಗೆ ರೇಬೀಸ್ ರೋಗದ ವಿರುದ್ಧ ಲಸಿಕೆ ಹಾಕಲಾಗಿದೆ. ರೇಬೀಸ್ ಲಸಿಕೆ ಲಭ್ಯವಿದ್ದು ಬೀದಿ ನಾಯಿಗಳನ್ನು ಹಿಡಿದು ತಂದಲ್ಲಿ ಅವುಗಳಿಗೆ ಉಚಿತವಾಗಿ ಲಸಿಕೆ ಹಾಕಲಾಗುವುದು.

ಈ ಕುರಿತು ಪಪಂ ಮುಖ್ಯಾಧಿಕಾರಿಗೆ ಪತ್ರ ಬರೆಯಲಾಗಿದೆ. 1676 ಕರುಗಳಿಗೆ ಕಂದು ರೋಗದ ವಿರುದ್ಧ, 7785 ರಾಸುಗಳಿಗೆ ಗಳಲೆ ರೋಗ ಹಾಗೂ 69732 ರಾಸುಗಳಿಗೆ ಚರ್ಮ ಗಂಟು ರೋಗದ ವಿರುದ್ಧ ಲಸಿಕೆ ಹಾಕಲಾಗಿದೆ. ಜಾನುವಾರುಗಳ ಆರೋಗ್ಯ ಶಿಬಿರಗಳನ್ನು ಏರ್ಪಡಿಸಿ ಚಿಕಿತ್ಸೆ ನೀಡುತ್ತಿರುವುದಾಗಿ ಮಾಹಿತಿ ನೀಡಿದರು.

# 5103 ಮಕ್ಕಳಿಗೆ ಲಸಿಕೆ ಹಾಕುವ ಗುರಿ: ಮಲ್ಲಿಕಾರ್ಜುನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಡಿ. 21 ರಂದು ನಡೆಯಲಿರುವ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ತಾಲ್ಲೂಕಿನಲ್ಲಿ 5103 ಮಕ್ಕಳಿಗೆ ಹನಿ ಹಾಕುವ ಗುರಿ ಹೊಂದಲಾಗಿದೆ ಎಂದು ತಹಸೀಲ್ದಾರ್ ಮಲ್ಲಿಕಾರ್ಜುನ ತಿಳಿಸಿದರು.

ಪಟ್ಟಣದ ಮಿನಿ ವಿಧಾನಸೌಧ ಸಭಾಂಗಣದಲ್ಲಿ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ,

ಕಾರ್ಯಕ್ರಮ ಯಶಸ್ಸುಗೊಳಿಸಲು ಪ್ರತಿಯೊಂದು ಇಲಾಖೆ ಸಹಕಾರ ಅಗತ್ಯವಾಗಿದೆ. ಡಿ. 18ರಿಂದ ಒಂದು ವಾರ ನಿರಂತರವಾಗಿ ವಿದ್ಯುತ್ ಸಂಪರ್ಕ ಕಡಿತವಾಗದಂತೆ ಸೆಸ್ಕ್ ಇಲಾಖೆ ಸಹಕರಿಸಬೇಕು. ಕೆ.ಹೊಸಕೋಟೆ, ಅಬ್ಬನ ಮತ್ತು ರಾಯರಕೊಪ್ಪಲು ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ 63 ಅಪಾಯಕಾರಿ ಪ್ರದೇಶಗಳನ್ನು



ಗುರುತಿಸಲಾಗಿದ್ದು, ಲಸಿಕೆ ನೀಡಲು ಮೊಬೈಲ್ ತಂಡ ರಚಿಸಲಾಗಿದೆ ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ನಿಸಾರ್ ಫಾತಿಮ ಮಾತನಾಡಿ, ಕಳೆದ ಸಾಲಿನಲ್ಲಿ ಶೇ. 101. ಗುರಿ ಸಾಧಿಸಲಾಗಿತ್ತು.

94 ಅಂಗನವಾಡಿ ಕಾರ್ಯಕರ್ತೆಯರು, 75 ಆಶಾ ಕಾರ್ಯಕರ್ತೆಯರು, 13 ಇಲಾಖೆ ಸಿಬ್ಬಂದಿ, 8 ಸ್ವಯಂ ಸೇವಕರು ಲಸಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. 184 ವ್ಯಾಕ್ಸಿನೇಟರ್, 9 ಮೇಲ್ವಿಚಾರಕರಿದ್ದಾರೆ. ಗ್ರಾಮೀಣ ಬೂತ್‌ಗಳಲ್ಲಿ ವ್ಯಾಕ್ಸಿನೇಟರ್‌ಗಳಿಗೆ ಪಂಚಾಯಿತಿ ವತಿಯಿಂದ ಆಹಾರ ಒದಗಿಸಲಬೇಕು.

ಮಲೆನಾಡು ಪ್ರದೇಶಗಳಾದ ಕೆ. ಹೊಸಕೋಟೆ, ಗಂಜಿಗೆರೆ, ಚನ್ನಾಪುರ ಗ್ರಾಮಗಳ ವ್ಯಾಪ್ತಿ ವಲಸೆ ಪ್ರದೇಶವಾಗಿರುವುದರಿಂದ ಹೆಚ್ಚಿನ ಜಾಗ್ರತೆ ವಹಿಸಲಾಗಿದೆ. ಪಟ್ಟಣದ ಸಾರಿಗೆ ಬಸ್ ನಿಲ್ದಾಣದಲ್ಲಿ ಬೂತ್ ತೆರೆಯಲಾಗಿದೆ ಎಂದು ಹೇಳಿದರು.

ಲಸಿಕೆ ಪಡೆಯದೆ ಉಳಿದಿರುವ ಮಕ್ಕಳಿಗೆ ಪಟ್ಟಣ ಪ್ರದೇಶದಲ್ಲಿ ಮೂರು ದಿನ ಮತ್ತು ಗ್ರಾಮೀಣ ಪ್ರದೇಶದಲ್ಲಿ ಎರಡು ದಿನ ಲಸಿಕೆ ನೀಡಲಾಗುವುದು. ಲಸಿಕೆಯಿಂದ ವಂಚಿತರಾಗದಂತೆ ಪೋಷಕರು ಜಾಗ್ರತೆ ವಹಿಸಬೇಕು ಎಂದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ಹಾಗೂ ಇತರರಿದ್ದರು.


# ಮಕ್ಕಳ ಮೇಲೆ ಒತ್ತಡ ಹೇರದೆ ಸ್ವಾತಂತ್ರ್ಯ ಕಲ್ಪಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಅಂಕಗಳನ್ನು ಮಾತ್ರ ಮಾನದಂಡವನ್ನಾಗಿಸಿ ಮಕ್ಕಳ ಮೇಲೆ ಒತ್ತಡ ಹೇರಬಾರದು ಎಂದು ಖ್ಯಾತ ಲೇಖಕ ಡಾ. ಹಂಪನಹಳ್ಳಿ ತಿಮ್ಮೇಗೌಡ ಹೇಳಿದರು.

ಪಟ್ಟಣದ ರೋಟರಿ ಆಂಗ್ಲ ಶಾಲೆಯಲ್ಲಿ ಆಯೋಜಿಸಿದ್ದ 45ನೇ ವರ್ಷದ ಪ್ರತಿಭಾ ಡೇ ಕಾರ್ಯಕ್ರಮದಲ್ಲಿ ಮಾತನಾಡಿ, ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳನ್ನು ಅವಮಾನಿಸುವುದು ಅಥವಾ ಹೆಚ್ಚು ಅಂಕಗಳನ್ನು ಗಳಿಸಬೇಕೆಂದು ನಿರಂತರವಾಗಿ ಒತ್ತಡ ಹೇರುವುದರಿಂದ ಆ ಮಕ್ಕಳಲ್ಲಿ ಅಡಗಿರುವ ಇನ್ನೊಂದು ಪ್ರತಿಭೆಯ ಭವಿಷ್ಯ ನಾಶವಾದಂತಾಗುತ್ತದೆ ಎಂದು ಎಚ್ಚರಿಸಿದರು.

ಹೆಚ್ಚು ಅಂಕ ಪಡೆದ ಅನೇಕ ವಿದ್ಯಾವಂತರು ಸಮಾಜದಲ್ಲಿ




ಸಣ್ಣ ಸಮಸ್ಯೆ ಎದುರಿಸುವುದಕ್ಕೂ ಹೆದರುತ್ತಿರುವುದನ್ನು ನಾವು ನೋಡುತ್ತಿದ್ದೇವೆ ಎಂದರು.

ಮಕ್ಕಳನ್ನು ಸಮಾಜದೊಂದಿಗೆ, ಅಕ್ಕಪಕ್ಕದವರು ಹಾಗೂ ಕುಟುಂಬದವರೊಂದಿಗೆ ಬೆರೆಸಿ ಬೆಳೆಸಬೇಕು. ಮಕ್ಕಳಿಗೆ ನೈತಿಕ ಮೌಲ್ಯಗಳ ಶಿಕ್ಷಣ ಅತ್ಯಂತ ಅಗತ್ಯವಾಗಿದೆ. ಬಾಲ್ಯದಲ್ಲಿಯೇ ಹಣ ಹಾಗೂ ಸಂಪತ್ತಿನ ಮೇಲಿನ ಅತಿಯಾದ ವ್ಯಾಮೋಹ ಮಕ್ಕಳಲ್ಲಿ ಬೆಳೆಸಿದರೆ, ಮುಂದೆ ಅದೇ ಮಕ್ಕಳು ತಮ್ಮ ತಂದೆ-ತಾಯಿಗಳನ್ನು ವೃದ್ಧಾಶ್ರಮಕ್ಕೆ ಕಳುಹಿಸುವ ಪರಿಸ್ಥಿತಿ ಉಂಟಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಸಹಜವಾಗಿ ರೈತರು ಹಾಗೂ ಬಡವರ ಕುಟುಂಬದ ತಂದೆ-ತಾಯಿಗಳು ವೃದ್ಧಾಶ್ರಮದಲ್ಲಿ ಕಾಣಿಸಿಕೊಳ್ಳುವುದಿಲ್ಲ. ಉನ್ನತ ಶಿಕ್ಷಣ ಪಡೆದು ಲಕ್ಷಾಂತರ ರೂ. ಸಂಪಾದನೆ ಮಾಡುತ್ತಿರುವ ಶ್ರೀಮಂತ ಕುಟುಂಬಗಳವರೇ ಶೇ. 90ಕ್ಕಿಂತ ಹೆಚ್ಚು ವೃದ್ಧಾಶ್ರಮಗಳಲ್ಲಿ ಇದ್ದಾರೆ. ಹಿಂದೆ ವಿದೇಶಗಳಲ್ಲಿ ಮಾತ್ರ ವೃದ್ಧಾಶ್ರಮ ಸಂಸ್ಕೃತಿ ಹೆಚ್ಚು ಇತ್ತು. ದೇಶದ ಹಳ್ಳಿಗಳಿಗೂ ಸಹ ಈ ಸಂಸ್ಕೃತಿ ಹರಡುತ್ತಿರುವುದು ಕಳವಳಕಾರಿಯಾಗಿದೆ ಎಂದು ಹೇಳಿದರು.

ಆದ್ದರಿಂದ ಮಕ್ಕಳಿಗೆ ಬಾಲ್ಯದಿಂದಲೇ ಹಣಕ್ಕಿಂತ ಜ್ಞಾನ ಮುಖ್ಯ, ಆಸ್ತಿಗಿಂತ ನೈತಿಕ ಮೌಲ್ಯಗಳು ಮುಖ್ಯ ಎಂಬ ಪಾಠವನ್ನು ಕಲಿಸಬೇಕಾಗಿದೆ ಎಂದು ಡಾ. ಹಂಪನಹಳ್ಳಿ ತಿಮ್ಮೇಗೌಡ ಸಲಹೆ ನೀಡಿದರು.

ರೋಟರಿ ವಿದ್ಯಾ ಸಂಸ್ಥೆಯ ಅಧ್ಯಕ್ಷ ಎಂ.ಎಸ್.ವಿಜಯಶಂಕರ, ಕಾರ್ಯದರ್ಶಿ ಅರುಣ್ ರಕ್ಷಿದಿ, ರೋಟರಿ ಟ್ರಸ್ಟ್ ಅಧ್ಯಕ್ಷ ಎಸ್.ಸಿ.ಸ್ವಾಮಿ, ಕಾರ್ಯದರ್ಶಿ ರವಿಕುಮಾರ್, ರೋಟರಿ ಸಂಸ್ಥೆಯ ಅಧ್ಯಕ್ಷ ಕೆ.ಜಿ.ಚಂದ್ರಶೇಖರ್, ಕಾರ್ಯದರ್ಶಿ ಎಂ.ಡಿ. ವಿಜಿತ್, ಪ್ರಾಂಶುಪಾಲ ಸುಮಂತ್ ಭಾರ್ಗವ್, ಮುಖ್ಯ ಶಿಕ್ಷಕ ಎಂ.ಡಿ.ರುದ್ರೇಶ್, ಮುಖ್ಯ ಶಿಕ್ಷಕಿ ಬಿ.ಡಿ. ರತ್ನ, ಎಸ್.ಬಿ. ನಂದನ್ ಇತರರಿದ್ದರು.

# ಇಂದಿನಿಂದ ಬಾಳೆಹೊನ್ನೂರಿನಲ್ಲಿ ಕಾಫಿ ಮಂಡಳಿ ಶತಮಾನೋತ್ಸವ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಚಿಕ್ಕಮಗಳೂರು ಜಿಲ್ಲೆ ಬಾಳೆ ಹೊನ್ನೂರಿನಲ್ಲಿರುವ ಕೇಂದ್ರೀಯ ಕಾಫಿ ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಹಿನ್ನೆಲೆಯಲ್ಲಿ ಡಿ.20 ರಿಂದ ಮೂರು ದಿನಗಳ ಕಾಲ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸದಸ್ಯ ಎನ್.ಬಿ.ಉದಯಕುಮಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು ಮೊದಲ ದಿನ ಬೆಳಿಗ್ಗೆ 10 ಗಂಟೆಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಮಾರಂಭ ಉದ್ಘಾಟಿಸಲಿದ್ದಾರೆ. ಸಚಿವರಾದ ಕೆ.ಜೆ.ಜಾರ್ಜ್, ಎಸ್.ಎಸ್.ಮಲ್ಲಿಕಾರ್ಜುನ ಸೇರಿ ಚಿಕ್ಕಮಗಳೂರು, ಹಾಸನ, ಮಡಿಕೇರಿ ಹಾಗೂ ಮೈಸೂರು ಜಿಲ್ಲೆಯ ಶಾಸಕರು, ಸಂಸದರು ಸೇರಿ ಎಲ್ಲ ಜನಪ್ರತಿನಿಧಿಗಳು ಭಾಗಿಯಾಗಲಿದ್ದಾರೆ ಎಂದು ಹೇಳಿದರು.


# ಮನೆಯಿಂದಲೇ ಮಕ್ಕಳಿಗೆ ಸಂಸ್ಕಾರ ಹೇಳಿಕೊಡಬೇಕು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಪೋಷಕರು ಮಕ್ಕಳಿಗೆ ಸಂಸ್ಕಾರ ಕಲಿಸುವ ಪರಿಪಾಠ ಮನೆಯಿಂದಲೇ ಪ್ರಾರಂಭಿಸಬೇಕು. ಶುದ್ಧ ಮನಸ್ಸಿನಿಂದ ಕಲಿತ ವಿದ್ಯೆ ಎಂದಿಗೂ ನಶಿಸುವುದಿಲ್ಲ ಎಂದು ಉಡುಪಿ ಅದಮಾರ್ ಮಠದ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶ್ರೀ ಈಶಪ್ರಿಯ ತೀರ್ಥ ಶ್ರೀಪಾದರು ಹೇಳಿದರು.

ಪಟ್ಟಣದ ಪೂರ್ಣಪ್ರಜ್ಞ ಶಾಲಾ ವಾರ್ಷಿಕೋತ್ಸವದಲ್ಲಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅಂಕಗಳಿಗೆ ಮಾತ್ರ ಸೀಮಿತವಾಗದೆ ಮೌಲ್ಯಾಧಾರಿತ ಶಿಕ್ಷಣ ಅತ್ಯಗತ್ಯವಾಗಿದೆ. ಮಕ್ಕಳಲ್ಲಿ ಶಿಸ್ತು, ಸತ್ಯ ನಿಷ್ಠೆ, ಸೇವಾ ಭಾವನೆ ಹಾಗೂ ಸಮಾಜದ ಮೇಲಿನ ಹೊಣೆಗಾರಿಕೆಯನ್ನು ಬೆಳೆಸುವಲ್ಲಿ ಪೋಷಕರು ಮತ್ತು ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಶಾಲಾ ಶಿಕ್ಷಣವು ಮಕ್ಕಳ ಬೌದ್ಧಿಕ ಬೆಳವಣಿಗೆಯ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕು. ಸಂಸ್ಕಾರಯುತ ಶಿಕ್ಷಣ



ಪಡೆದ ಮಕ್ಕಳು ಜೀವನದಲ್ಲಿ ಯಾವ ಪರಿಸ್ಥಿತಿಯಲ್ಲೂ ಸರಿಯಾದ ದಾರಿ ಆಯ್ಕೆ ಮಾಡಿಕೊಳ್ಳುತ್ತಾರೆ. ಗುರುಗಳ ಮಾರ್ಗದರ್ಶನ ಮತ್ತು ಪೋಷಕರ ಪ್ರೀತಿಯ ಸಂಯೋಜನೆಯೇ ಮಕ್ಕಳ ಭವಿಷ್ಯವನ್ನು ಉಜ್ವಲಗೊಳಿಸುತ್ತದೆಂದು ಸ್ವಾಮೀಜಿ ತಿಳಿಸಿದರು.


ಮಂಗಳೂರಿನ ಸಿವಿಲ್ ನ್ಯಾಯಾಧೀಶ ಚಿರಾಗ್ ಮಾತನಾಡಿ, ನಾನು ಸಹ ಇದೇ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಯಾಗಿದ್ದು ಶಾಲಾ ದಿನಗಳಲ್ಲಿ ಶಾಲೆಯ ಬಗ್ಗೆ ನಮಗೆ ಬಾಲ್ಯದಲ್ಲಿ ತಿಳಿದಿರುವುದಿಲ್ಲ. ಆದರೆ ಈ ಶಾಲೆಯಿಂದ ಕಲಿತು ಹೋದ ನಂತರ ನಮ್ಮನ್ನು ಯಾವ ರೀತಿ ಸಂಸ್ಕಾರಯುತವಾಗಿ ಬದಲಿಸುತ್ತದೆ ಎಂಬುದನ್ನು ಇಲ್ಲಿ ಕಲಿತ ಸಾವಿರಾರು ವಿದ್ಯಾರ್ಥಿಗಳೇ ಸಾಕ್ಷಿ. ಶಿಕ್ಷಣ ಒಂದು ಫ್ಯಾಷನ್ ಇದ್ದ ಹಾಗೆ ಅದನ್ನು ತುಂಬು ಮನಸ್ಸಿನಿಂದ ಪ್ರೀತಿಸಬೇಕು. ಆಗ ನಾವು ಏನು ಗುರಿ ಇಟ್ಟುಕೊಂಡಿರುತ್ತೇವೋ ಅದನ್ನು ಸಾಧಿಸಬಹುದು. ಅದರ ಜೊತೆ ಪೋಷಕರು ಸಹ ಮಕ್ಕಳಲ್ಲಿ ಯಾವ ವಿಷಯದ ಬಗ್ಗೆ ಹೆಚ್ಚು ಆಸಕ್ತಿ ಇರುತ್ತದೆ ಅದರ ಬಗ್ಗೆ ಮಹತ್ವ ನೀಡುವಂತೆ ಮನವಿ ಮಾಡಿದ ಅವರು ಶಿಕ್ಷಣ ಕೇವಲ ಅಂಕಗಳಿಗೆ ಮಾತ್ರ ಸೀಮಿತವಾಗಿಲ್ಲ. ನಮ್ಮ ಏಳಿಗೆ ಹಾಗೂ ಜೊತೆಗಿರುವವರನ್ನು ಬೆಳೆಸುವಂತಹ ಶಿಕ್ಷಣ ಆಗಿರಬೇಕು. ಆ ಶಿಕ್ಷಣದಿಂದ ಈ ಸಮಾಜಕ್ಕೆ ಏಡನು ಕೊಡುಗೆ ನೀಡುತ್ತೇವೆ ಎಂದು ಮೊದಲು ಅರಿತಿರಬೇಕು ಎಂದರು.

ಉಡುಪಿ ಅದಮಾರು ಮಠದ ಶಿಕ್ಷಣ ಮಂಡಳಿ ಕಾರ್ಯದರ್ಶಿ ಡಾ. ಎ.ಪಿ. ಭಟ್ ಮಾತನಾಡಿ, ಇಂದಿನ ಶಿಕ್ಷಣ ವ್ಯವಸ್ಥೆ ಕೇವಲ ಪಠ್ಯಾಧಾರಿತವಾಗಿರದೆ ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಗೆ ಒತ್ತು ನೀಡಬೇಕು ಎಂದರು.

ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಸ್ತು, ಶ್ರಮ ಹಾಗೂ ಸಮಯ ಪಾಲನೆ ವಿದ್ಯಾರ್ಥಿ ಜೀವನದ ಮೂಲ ಮಂತ್ರಗಳಾಗಿದ್ದು, ಇವುಗಳನ್ನು ಅಳವಡಿಸಿಕೊಂಡರೆ ಯಶಸ್ಸು ಖಚಿತ ಎಂದು ತಿಳಿಸಿದರು.

ಕಾರ್ಯದರ್ಶಿ ಮುರುಳಿಧರ, ಜಂಟಿ ಕಾರ್ಯದರ್ಶಿ ಅನಂತಸ್ವಾಮಿ, ಪ್ರಾಂಶುಪಾಲ ಪ್ರಶಾಂತ್ ಕುಮಾರ್, ಪ್ರಾಥಮಿಕ ಶಾಲೆಯ ಪ್ರಾಂಶುಪಾಲೆ ಶ್ರೀನಿಧಿ ಮತ್ತಿತರರಿದ್ದರು.

# ಡಿ.20ರ ವರೆಗೆ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಅಭ್ಯಾಸ ಪರೀಕ್ಷೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ತಾಲೂಕಿನಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಡಿ. 20ರ ವರೆಗೆ ಅಭ್ಯಾಸ ಪರೀಕ್ಷೆ ಹಮ್ಮಿಕೊಳ್ಳಲಾಗಿದೆ ಎಂದು ಬಿಇಒ ನಾರಾಯಣ ತಿಳಿಸಿದರು.

ಪಟ್ಟಣದ ಸಮಾಜ ಕಲ್ಯಾಣ ಇಲಾಖೆ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳ ಅಭ್ಯಾಸ ಅವಲೋಕಿಸಿದ ಬಳಿಕ ಮಾತನಾಡಿ, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕೆಎಸ್‌ಇಎಬಿ ತನ್ನ ಲಾಗಿನ್‌ನಲ್ಲಿ ಪ್ರತಿ ವಿಷಯದ ತಲಾ ನಾಲ್ಕು ಅಭ್ಯಾಸ ಪ್ರಶ್ನೆ ಪತ್ರಿಕೆ ನೀಡಿದ್ದು, ಅದರಲ್ಲಿ ಮೊದಲ ಪ್ರಶ್ನೆ ಪತ್ರಿಕೆಯ ಪರೀಕ್ಷೆಯನ್ನು ನಡೆಸುವಂತೆ ತಾಲ್ಲೂಕಿನ ಎಲ್ಲ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರಿಗೆ ಸೂಚನೆ ನೀಡಲಾಗಿದೆ ಎಂದರು.

ವಿದ್ಯಾರ್ಥಿಗಳು ನಿಗದಿತ ದಿನ ರಾತ್ರಿ 7 ರಿಂದ 9.30ರ ವರೆಗೆ ಪರೀಕ್ಷೆಯನ್ನು ತಮ್ಮ ಮನೆಯಲ್ಲೇ ಕುಳಿತು ಬರೆಯುವರು. ಪರೀಕ್ಷೆ ಬರೆಯಲು ವಾತಾವರಣ ನಿರ್ಮಿಸಿಕೊಡಲು ಪೋಷಕರಿಗೆ ಸೂಚನೆ ನೀಡಲಾಗಿದೆ. ಮಕ್ಕಳು ಪುಸ್ತಕ ನೋಡಿ ಅಥವಾ ನೋಡದೆಯೂ ಪರೀಕ್ಷೆ ಸಮಿತಿಯ ಬರೆಯಬಹುದು ಪರೀಕ್ಷಾ ಶಿಕ್ಷಕರು ವಿದ್ಯಾರ್ಥಿಗಳ ಮನೆಗೆ ಭೇಟಿ ನೀಡಿ ಪರಿಶೀಲಿಸುವರು.

ಚರ್ಚೆ ಮರು ದಿನ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಶಿಕ್ಷಕರು ಪರಿಶೀಲಿಸಿ ವಿದ್ಯಾರ್ಥಿಗಳೊಂದಿಗೆ ನಡೆಸುವರು. ತಾಲೂಕಿನ ಪ್ರೌಢ ಶಾಲೆಗಳಲ್ಲಿ 10ನೇ ತರಗತಿ ವಿದ್ಯಾರ್ಥಿಗಳ ತಂಡ ರಚಿಸಿದ್ದು, ಈ ತಂಡದ ನಾಯಕರಿಗೆ ಪರೀಕ್ಷಾ ನೀಲ ನಕ್ಷೆ ತಿಂಗಳಿನಲ್ಲಿ ಹೆಚ್ಚಿನ ಅಂಕಗಳಿಕೆ ಕುರಿತು ಮಾಹಿತಿ ಹಾಗೂ ಜನವರಿ ಕುರಿತು ಕಾರ್ಯಾಗಾರ ಹಮ್ಮಿಕೊಂಡಿರುವುದಾಗಿ ಹೇಳಿದರು.

# ಇತಿಹಾಸದಲ್ಲಿ ಈ ದಿನ

## ಡಿಸೆಂಬರ್-20

1803: ಲೂಯಿಸಿಯಾನಾ ಒಪ್ಪಂದದ ಮೂಲಕ ಫ್ರಾನ್ಸ್ ಅಮೆರಿಕಕ್ಕೆ ಲೂಯಿಸಿಯಾನಾ ಪ್ರದೇಶವನ್ನು ಅಧಿಕೃತವಾಗಿ ಹಸ್ತಾಂತರಿಸಿತು.

1917: ಅಮೆರಿಕ ಸಂಸತ್ತು ಮಹಿಳೆಯರಿಗೆ ಮತ ಹಕ್ಕು ನೀಡುವ ಸಂವಿಧಾನ ತಿದ್ದುಪಡಿ ಪ್ರಸ್ತಾವನೆಗೆ ಅನುಮೋದನೆ ನೀಡಿತು.

1995: ಅಮೆರಿಕಾ ಮತ್ತು ವಿಯೆಟ್ನಾಂ ನಡುವಿನ ರಾಜತಾಂತ್ರಿಕ ಸಂಬಂಧಗಳು ಪುನಃ ಸ್ಥಾಪಿಸಲ್ಪಟ್ಟವು.

### ಜನನ

1864: ಎಚ್.ಎಸ್. ಮ್ಯಾಕ್ಸ್‌ವೆಲ್, ವಿಜ್ಞಾನಿ

1957: ಅಣ್ಣಾ ಚೈಕೋವ್ಸ್ಕಿ, ಯುರೋಪಿಯನ್ ರಾಜಕಾರಣಿ

### ಮರಣ

1973: ಲೂಯಿಸ್ ಬಾರ್ಥ್, ಖ್ಯಾತ ಲೇಖಕ ಮತ್ತು ಚಿಂತಕ

2016: ಎಡ್ವರ್ಡ್ ಗ್ರೀನ್‌ಸ್ಪಾನ್, ಪ್ರಸಿದ್ಧ ಅರ್ಥಶಾಸ್ತ್ರಜ್ಞ

# ಪ್ರತ್ಯೇಕ ಅಪಘಾತದಲ್ಲಿ ಮೂವರ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯ ವಿವಿಧ ಠಾಣಾ ವ್ಯಾಪ್ತಿಯಲ್ಲಿ ನಡೆದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ನಾಲ್ಕು ವರ್ಷದ ಮಗು ಸೇರಿ ಮೂವರು ಮೃತಪಟ್ಟು ಇಬ್ಬರು ಗಾಯಗೊಂಡಿರುವ ಘಟನೆ ನಡೆದಿದೆ.

ಚನ್ನರಾಯಪಟ್ಟಣ ತಾಲ್ಲೂಕಿನ ಮಂಡಿಕೊಪ್ಪಲು ಗೇಟ್‌ನ ಗಾರ್ಡ್‌ವಿನ್ ಕಾನ್ವೆಂಟ್‌ನ ಮುಖ್ಯ ರಸ್ತೆಯಲ್ಲಿ ಗೂಡ್ಸ್ ವಾಹನ ಡಿಕ್ಕಿಯಾಗಿ ಬೈಕ್ ಮೇಲಿದ್ದ ಬಿದ್ದು ಮಗು ಮೃತಪಟ್ಟಿದೆ.

ಬಾಗೂರು ಹೋಬಳಿ ಕಕ್ಕಿಹಳ್ಳಿ ಗ್ರಾಮದ ದಿಕ್ಷಿತ್ ಗೌಡ ಮೃತ ದುರ್ದೈವಿ. ಮತ್ತೊಂದು ಮಗು ಸಾರ್ಥಕ್ ಮತ್ತು ಬೈಕ್ ಸವಾರ ಚೋಳರಾಜು ಎಂಬುವವರಿಗೆ ಗಾಯಗಳಾಗಿವೆ.

ಬುಧವಾರ ಎಂದಿನಂತೆ ಶಾಲೆ ಬಿಟ್ಟ ಬಳಿಕ ಇಬ್ಬರೂ ಮಕ್ಕಳನ್ನು ಬೈಕ್‌ನಲ್ಲಿ ಕೂರಿಸಿಕೊಂಡಿದ್ದ ಚೋಳರಾಜು ರಸ್ತೆ ದಾಟಲು ನಿಂತಿದ್ದಾಗ ಕೆಂಬಾಳು ಕಡೆಯಿಂದ ವೇಗವಾಗಿ ಬಂದ ಗೂಡ್ಸ್ ವಾಹನ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಮೂವರು ಕೆಳಗೆ ಬಿದ್ದಿದ್ದು ತಲೆಗೆ ಬಲವಾದ ಪೆಟ್ಟು ಬಿದ್ದ ಹಿನ್ನಲೆಯಲ್ಲಿ ಬಾಲಕ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ನುಗ್ಗೇಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿರುವ ಘಟನೆ ಅರಸೀಕೆರೆ ತಾಲ್ಲೂಕು ತಿಪಟೂರು ರಸ್ತೆಯಲ್ಲಿ ನಡೆದಿದೆ.

ಅರಸೀಕೆರೆ ತಾಲ್ಲೂಕು ಹುಣಸಿಕಟ್ಟೆ ಗ್ರಾಮದ ಬಸವರಾಜು (70) ಮೃತರು.

ರಾಮಸಾಗರ ಗ್ರಾಮದಲ್ಲಿ ಜಮೀನು ಕೆಲಸ ಮಾಡಿಕೊಂಡಿದ್ದ ಬಸವರಾಜು ಮನೆಗೆ ಸಾಮಾಗ್ರಿ ತರಲೆಂದು ಹೋಗುತ್ತಿದ್ದಾಗ ತಿಪಟೂರು ಕಡೆಯಿಂದ ವೇಗವಾಗಿ ಬಂದ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ವೃದ್ಧ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಅರಸೀಕೆರೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಬೈಕ್ ನಿಯಂತ್ರಣ ತಪ್ಪಿ ಕೆಳಗೆ ಬಿದ್ದು ಹಿಂಬದಿ ಸವಾರ ಮೃತಪಟ್ಟಿರುವ ಘಟನೆ ಹಾಸನ ತಾಲ್ಲೂಕಿನ ಮಾರ್ಗನಹಳ್ಳಿ ಸಮೀಪ ನಡೆದಿದೆ. ಕಟ್ಟಾಯ ಹೋಬಳಿ ಬಿಲಗುಂದ ಗ್ರಾಮದ ಬಿ.ಜಿ. ಚೇತನ್ ಮೃತರು. ಮನೆಗೆ ಸಾಮಾಗ್ರಿ ತರಲೆಂದು ರಂಗಸ್ವಾಮಿ ಎಂಬುವವರ ಜೊತೆಗೆ ಹಾಸನಕ್ಕೆ ತೆರಳಿದ್ದರು. ರಾತ್ರಿ 8ರ ಸಮಯದಲ್ಲಿ ವಾಪಾಸ್ ಊರಿಗೆ ಹೋಗುತ್ತಿದ್ದಾಗ ಬೈಕ್ ನಿಯಂತ್ರಣ ತಪ್ಪಿ ಹಿಂಬದಿ ಕುಳಿತಿದ್ದ ಚೇತನ್ ನಿಯಂತ್ರಣ ತಪ್ಪಿ ಕೆಳಗೆ ಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹಾಸನ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಾಸನದಲ್ಲಿ ಪೆಟ್ರೋಲ್ ಕಳ್ಳರ ಜಾಲ ಸಕ್ರಿಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಕೈಗಾರಿಕಾ ಪ್ರದೇಶದಲ್ಲಿ ಲೋಡ್ ಆಗಿರುವ ಪೆಟ್ರೋಲ್ ಹಾಗೂ ಡೀಸೆಲ್ ಕದ್ದು ಮಾರಾಟ ಮಾಡುತ್ತಿದ್ದ ಪ್ರಕರನವನ್ನು ಪೊಲೀಸರು ಬುಧವಾರ ಬೇಧಿಸಿದ್ದಾರೆ. ಪೊಲೀಸರ ದಿಢೀರ್ ದಾಳಿಯಿಂದ ಎಂ.ಹೊಸಕೊಪ್ಪಲು ಗ್ರಾಮದ ಯೋಗೇಶ್ ಹಾಗೂ ಇತರರು ಸ್ಥಳದಿಂದ ಕಾಲ್ಕಿತ್ತಿದ್ದಾರೆ. ಖಚಿತ ಮಾಹಿತಿ ಮೇರೆಗೆ ನಗರ ಠಾಣೆ ಸಿಬ್ಬಂದಿಯು ಜ್ಞಾನಗುರುಕುಲ ಇಂಟರ್ ನ್ಯಾಷನಲ್ ಸ್ಕೂಲ್ ಸಮೀಪದಲ್ಲಿರುವ ಭರತ್ ವೇ ಬ್ರಿಡ್ಸ್ ರಸ್ತೆಯ ಖಾಲಿ ಶೆಡ್‌ನಲ್ಲಿ ಪೆಟ್ರೋಲ್ ಮತ್ತು ಡೀಸೆಲ್‌ಗಳನ್ನು ಕ್ಯಾನ್‌ಗಳಲ್ಲಿ ತುಂಬಿಸಿಟ್ಟಿರುವುದನ್ನು ಪತ್ತೆ ಹಚ್ಚಿದ್ದಾರೆ. ಸುಮಾರು 50 ಲೀಟರ್ ಕ್ಯಾನ್‌ಗಳಲ್ಲಿ ಇಂಧನವನ್ನು ತುಂಬಿಸಿದ್ದು ಈ ಬಗ್ಗೆ ಸ್ಥಳೀಯರನ್ನು ಕೇಳಿದಾಗ ನಿತ್ಯವೂ ಇಲ್ಲಿ ಈ ಕೆಲಸ ನಡೆಯುತ್ತದೆ. ಸಾರ್ವಜನಿಕರಿಗೆ ಕಡಿಮೆ ಬೆಲೆಗೆ ಮಾರಾಟ ಮಾಡುತ್ತಾರೆಂದು ತಿಳಿಸಿದ್ದಾರೆ.

ಲಾರಿ ಚಾಲಕ ಹಾಗೂ ನಿರ್ವಾಹಕರಿಗೆ ಗೊತ್ತಾಗದ ರೀತಿಯಲ್ಲಿ ರಾತ್ರೋರಾತ್ರಿ ಪೆಟ್ರೋಲ್ ಖದ್ದು ಮಾರಾಟ ಮಾಡುತ್ತಾರೆಂಬುದು ತಿಳಿದುಬಂದಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248